# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 358
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 07.12.2023
4. ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರಿನ ದಂಡಿನ ಪ್ರದೇಶದ ವ್ಯಾಪ್ತಿಯಲ್ಲಿರುವ ಕಾವಲ್ ಭೈರಸಂದ್ರ, ಕಲ್ಯಾಣನಗರ, ಬಾಣಸವಾಡಿ, ಗೋವಿಂದಪುರ ಮತ್ತು ಎಂ.ಜಿ. ರಸ್ತೆಗಳಲ್ಲಿ ಮಾದಕ ದ್ರವ್ಯ ಮಾರಾಟ, ಯುವಕರು ರಸ್ತೆಗಳಲ್ಲಿ ದ್ವಿಚಕ್ರ ವಾಹನಗಳಲ್ಲಿ ವ್ಹೀಲಿಂಗ್ ಮಾಡುತ್ತಿರುವುದು ಮುಂತಾದ ಕಾನೂನು ಬಾಹಿರ ಕೃತ್ಯಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವುಗಳನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಸರ್ಕಾರದ ಗಮನಕ್ಕೆ ಬಂದಿದೆ.<br><br>ಬೆಂಗಳೂರಿನ ದಂಡಿನ ಪ್ರದೇಶದ ವ್ಯಾಪ್ತಿಯಲ್ಲಿರುವ ಕಾವಲ್ ಭೈರಸಂದ್ರ, ಕಲ್ಯಾಣನಗರ, ಬಾಣಸವಾಡಿ, ಗೋವಿಂದಪುರ ಮತ್ತು ಎಂ.ಜಿ. ರಸ್ತೆಗಳಲ್ಲಿ ಮಾದಕ ದ್ರವ್ಯ ಮಾರಾಟ, ಯುವಕರು ರಸ್ತೆಗಳಲ್ಲಿ ದ್ವಿಚಕ್ರ ವಾಹನಗಳಲ್ಲಿ ವ್ಹೀಲಿಂಗ್ ಮಾಡುತ್ತಿರುವುದು ಮುಂತಾದ ಕಾನೂನು ಬಾಹಿರ ಕೃತ್ಯಗಳಲ್ಲಿ ಭಾಗಿಯಾಗಿರುವುದು ಕಂಡು ಬಂದಲ್ಲಿ ಅಂತಹವರ ವಿರುದ್ಧ ಪ್ರಕರಣಗಳನ್ನು ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.<br>ಬೆಂಗಳೂರು ನಗರ ಸಂಚಾರ ವಿಭಾಗದಿಂದ ವ್ಹೀಲಿಂಗ್ ಮಾಡುವಂತಹ ಸವಾರರುಗಳ ವಿರುದ್ಧ ಪರಿಣಾಮಕಾರಿಯಾಗಿ ಕ್ರಮಕೈಗೊಳ್ಳುವ ಸಲುವಾಗಿ ಮೋಟಾರು ವಾಹನ ಕಾಯ್ದೆ ಹಾಗೂ ಐಪಿಸಿ ಕಾಯ್ದೆ ರೀತ್ಯಾ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. ವ್ಹೀಲಿಂಗ್ ಮಾಡುವಂತಹ ಸವಾರರುಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮಕೈಗೊಳ್ಳುವ ಭಾಗವಾಗಿ ಸಂಚಾರ ವಿಭಾಗದಿಂದ ಕಾಲಕಾಲಕ್ಕೆ ವಿಶೇಷ ಕಾರ್ಯಾಚರಣೆಯನ್ನು ಹಮ್ಮಿಕೊಳ್ಳಲಾಗುತ್ತಿದೆ. |
| (ಆ) | ರಾಜ್ಯದಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಎಷ್ಟು ಮಾದಕ ದ್ರವ್ಯ ಮಾರಾಟಗಾರರ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗಿದೆ ಮತ್ತು ಕೈಗೊಂಡ ಕ್ರಮಗಳೇನು; | ರಾಜ್ಯದಲ್ಲಿ ಕಳೆದ 4 ವರ್ಷಗಳಲ್ಲಿ ಎನ್.ಡಿ.ಪಿ.ಎಸ್. ಕಾಯ್ದೆ ಅಡಿ ದಾಖಲಾದ ಪ್ರಕರಣಗಳು ಮತ್ತು ಸದರಿ ಪ್ರಕರಣಗಳಲ್ಲಿ ಕಾನೂನು ಕ್ರಮ ಕೈಗೊಂಡು ಆರೋಪಿಗಳನ್ನು ಬಂಧಿಸಲಾಗಿದ್ದು, ವಿವರಗಳನ್ನು ಈ ಕೆಳಕಂಡಂತೆ ನೀಡಲಾಗಿದೆ. |

| ಕ್ರ. ಸಂ. | ವರ್ಷಾವಾರು | ಎನ್.ಡಿ.ಪಿ.ಎಸ್. ಕಾಯ್ದೆ ಅಡಿಯಲ್ಲಿ ದಾಖಲಾದ ಪ್ರಕರಣಗಳ ವಿವರ | ಬಂಧಿಸಲಾದ ಆರೋಪಿಗಳ ಸಂಖ್ಯೆ |
|---|---|---|---|
| 1 | 2019 | 1661 | 2335 |
| 2 | 2020 | 4066 | 5160 |
| 3 | 2021 | 5789 | 6443 |
| 4 | 2022 | 6406 | 6148 |
| 5 | 2023 (25.11.2023) | 6199 | 5303 |

| | | |
|---|---|---|
| (ಇ) | ಮಾದಕ ದ್ರವ್ಯ ಸೇವನೆಯನ್ನು ತಡೆಗಟ್ಟಲು ಸರ್ಕಾರ ಯಾವ ರೀತಿಯ ಜಾಗೃತ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ; ಶಾಲಾ ಕಾಲೇಜುಗಳಲ್ಲಿ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ವಿಶೇಷವಾಗಿ ಜಾಗೃತಿ ಮೂಡಿಸಲು ಸರ್ಕಾರ ಯಾವುದಾದರೂ ವಿಶೇಷ ಯೋಜನೆ ರೂಪಿಸುವುದೇ? (ವಿವರ ನೀಡುವುದು) | **<u>ರಾಜ್ಯದಲ್ಲಿ ಡ್ರಗ್ಸ್ ದಂಧೆಯನ್ನು ನಿಯಂತ್ರಿಸಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.</u>**<br><br>➢ ಸಾರ್ವಜನಿಕರ ಅನುಕೂಲಕ್ಕಾಗಿ ಮಾದಕ ವಸ್ತು ಮಾರಾಟ ಮತ್ತು ಸೇವನೆ ಮಾಡುವವರ ವಿರುದ್ಧ ದೂರು ನೀಡಲು ಟೋಲ್ ಫ್ರೀ ಸಂಖ್ಯೆ 1908ನ್ನು ಸ್ಥಾಪಿಸಿದ್ದು, ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.<br>➢ ಮಾದಕ ವಸ್ತುಗಳ ಮಾರಾಟ ಜಾಲವನ್ನು ಪತ್ತೆ ಹಚ್ಚಿ ಅವರ ಮೊಬೈಲ್ ಸಿ.ಡಿ.ಆರ್.ಅನ್ನು ವಿಶ್ಲೇಷಿಸಿ ಮಾದಕ ವಸ್ತುಗಳ ಮಾರಾಟದ ಮೂಲದ ಬಗ್ಗೆ ಮಾಹಿತಿ ಸಂಗ್ರಹಿಸಿ ಕ್ರಮ ಜರುಗಿಸಲಾಗುತ್ತಿದೆ.<br>➢ ಬಾರ್ ಮತ್ತು ರೆಸ್ಟೋರೆಂಟ್, ಕಾಫಿ–ಡೇ, ಪಬ್, ಮುಂತಾದ ಕಡೆ ಯುವಕರು ಹೆಚ್ಚಾಗಿ ಸೇರುವ ಸ್ಥಳಗಳು, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವವರ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕ್ರಮ ಜರುಗಿಸಲಾಗುತ್ತಿದೆ.<br>➢ ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ಪೋಸ್ಟರ್‌ಗಳನ್ನು ಜನಸಂದಣಿ ಇರುವ ಸ್ಥಳಗಳಲ್ಲಿ ಪ್ರದರ್ಶಿಸಿ ಕರಪತ್ರ ಹಂಚಲಾಗುತ್ತಿದೆ. ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಸಾಮಾಜಿಕ ಜಾಲ ತಾಣಗಳಲ್ಲಿ ಚುಟುಕ ವಿಡಿಯೋಗಳ ಮೂಲಕ ದುಷ್ಪರಿಣಾಮಗಳ ಬಗ್ಗೆ ಅರಿವು ಮತ್ತು ಜಾಗೃತಿ ಸಹ ಮೂಡಿಸಲಾಗುತ್ತಿದೆ.<br>➢ ಶಾಲಾ ಕಾಲೇಜುಗಳು, ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳು, ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲಾಗುತ್ತಿದೆ.<br>➢ ಮಾದಕ ದ್ರವ್ಯದ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಶಾಲಾ–ಕಾಲೇಜುಗಳಲ್ಲಿ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ನಡೆಸಿ, ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಅಲ್ಲದೇ ಠಾಣಾ ಸರಹದ್ದಿನ ಬೀಟ್ ಮತ್ತು ಸಬ್–ಬೀಟ್‌ಗಳಲ್ಲಿ ಆಗ್ಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br>➢ ವಿದೇಶಿಯರು ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಇಂತಹ ಕೃತ್ಯವೆಸಗುವಂತಹವರ ವಿರುದ್ಧ ಕಠಿಣ ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಮಾದಕ ವಸ್ತುಗಳ ವ್ಯಸನಿಗಳನ್ನು ಗುರುತಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮುಖಾಂತರ ಡಿ–ಅಡಿಕ್ಷನ್ ಸೆಂಟರ್‌ಗಳಿಗೆ ಸೇರಿಸಲು ಕ್ರಮ ವಹಿಸಲಾಗುತ್ತಿದೆ.<br>➢ ಪದೇ ಪದೇ ಇಂತಹ ಕೃತ್ಯಗಳಲ್ಲಿ ತೊಡಗುವ ಡ್ರಗ್ ಪೆಡ್ಲರ್‌ಗಳ |

| | | |
|---|---|---|
| | | ವಿರುದ್ಧ "Prevention of Illicit Traffic in Narcotics Drugs & Psychotropic Substances Act, 1988"ರ ಅಡಿ ಪ್ರಕರಣ ದಾಖಲಿಸಿ ಕ್ರಮ ಜರುಗಿಸಲಾಗುತ್ತಿದೆ.<br>➢ ಠಾಣಾ ಸರಹದ್ದುಗಳಲ್ಲಿ ಹೊಯ್ಸಳ, ಚೀತಾ, ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಶಾಲಾ, ಕಾಲೇಜುಗಳ ಬಳಿ ಸೂಕ್ಷ್ಮವಾಗಿ ಗಮನಿಸಿ ಅಪರಿಚಿತ ವ್ಯಕ್ತಿಗಳ ಮಾಹಿತಿ ಸಂಗ್ರಹಿಸುವಂತೆ ಸೂಚಿಸಲಾಗಿದೆ. ಮಾದಕ ದ್ರವ್ಯ ಪದಾರ್ಥಗಳ ವಹಿವಾಟನ್ನು ತಡೆಗಟ್ಟಲು, ಪತ್ತೆಮಾಡಲು ಹಾಗೂ ಹದಿಹರೆಯದ ಯುವಕ ಮತ್ತು ಯುವತಿಯರನ್ನು ಇಂತಹ ದುಶ್ಚಟಗಳಿಂದ ತಡೆಗಟ್ಟುವ ಸಲುವಾಗಿ ಎಲ್ಲಾ ರೀತಿಯ ಸಾಧ್ಯವಿರುವ ಪ್ರಯತ್ನಗಳನ್ನು ಮಾಡಲಾಗುತ್ತಿದೆ.<br>➢ ಕೊರಿಯರ್ಸ್ / ಪೋಸ್ಟ್ ಮತ್ತು ಡಾರ್ಕ್‌ವೆಬ್ ಮೂಲಕ ಮಾದಕ ವಸ್ತುಗಳನ್ನು ಖರೀದಿಸುವವರ ಬಗ್ಗೆ ನಿಗಾವಹಿಸಿ ಕ್ರಮ ಜರುಗಿಸಲಾಗುತ್ತಿದೆ.<br>➢ ರಾಜ್ಯದಲ್ಲಿ 46 ಸೈಬರ್ ಎಕಾನಾಮಿಕ್ & ನಾರ್ಕೊಟಿಕ್ ಪೊಲೀಸ್ ಠಾಣೆ(CEN Police Station) ಸ್ಥಾಪಿತವಾಗಿದ್ದು, ಸದರಿ ಠಾಣೆಯು ಮಾದಕ ವಸ್ತುಗಳ ಚಟುವಟಿಕೆ ಕುರಿತು ನಿರಂತರವಾಗಿ ಮಾಹಿತಿಯನ್ನು ಕಲೆ ಹಾಕಿ ಪತ್ತೆ ಮಾಡುವಲ್ಲಿ ಕಾರ್ಯನಿರ್ವಹಿಸುತ್ತಿದೆ. |

ಒಇ 29 ಪಿಎನ್‌ಡಿ 2023(ಇ)

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು

## ಅನುಬಂಧ

| ಕ್ರ.ಸಂ. | ಪೊಲೀಸ್ ಠಾಣೆಯ ಹೆಸರು | 2021 | | 2022 | | 2023 | |
|---|---|---|---|---|---|---|---|
| | | ದಾಖಲಿಸಿದ ಪ್ರಕರಣಗಳ ವಿವರ | ಬಂಧಿಸಿದ ಆರೋಪಿಗಳ ವಿವರ | ದಾಖಲಿಸಿದ ಪ್ರಕರಣಗಳ ವಿವರ | ಬಂಧಿಸಿದ ಆರೋಪಿಗಳ ವಿವರ | ದಾಖಲಿಸಿದ ಪ್ರಕರಣಗಳ ವಿವರ | ಬಂಧಿಸಿದ ಆರೋಪಿಗಳ ವಿವರ |
| 1 | ಬಾಣಸವಾಡಿ ಪೊಲೀಸ್ ಠಾಣೆ | 35 | 41 | 27 | 37 | 14 | 17 |
| 2 | ಗೋವಿಂದಪುರ ಪೊಲೀಸ್ ಠಾಣೆ | 13 | 18 | 06 | 14 | 06 | 08 |
| 3 | ಡಿ.ಜೆ. ಹಳ್ಳಿ ಪೊಲೀಸ್ ಠಾಣೆ (ಕಾವಲ್ ಭೈರಸಂದ್ರ) | 13 | 21 | 11 | 14 | 11 | 15 |
| 4 | ಕಬ್ಬನ್‌ಪಾರ್ಕ್ ಪೊಲೀಸ್ ಠಾಣೆ (ಎಂ.ಜಿ. ರಸ್ತೆ) | 0 | 0 | 1 | 1 | 3 | 3 |
| 5 | ಅಶೋಕ್‌ನಗರ ಪೊಲೀಸ್ ಠಾಣೆ | 0 | 0 | 0 | 0 | 1 | 3 |
| **ಒಟ್ಟು** | | **61** | **80** | **45** | **66** | **35** | **46** |